ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಸಹಕಾರ ಸಂಘಗಳು ಮತ್ತು ರೈತರಿಗೆ ದೊರೆಯುವ ಸವಲತ್ತುಗಳ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು ):-

937(1060) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವ್ಯವಸಾಯ ಸೇವಾ ಸಹಕಾರ ಸಂಘಗಳ ಸಂಖ್ಯೆ ಎಷ್ಟು ; ಉಡುಪಿ ಜಿಲ್ಲೆಯಲ್ಲಿರುವ ವ್ಯವಸಾಯ ಸೇವಾ ಸಹಕಾರಿ ಸಂಘಗಳು ಯಾವುವು ; ಅವುಗಳು ಯಾವ ಯಾವ ಗ್ರಾಮದ ವ್ಯಾಪ್ತಿಯನ್ನು ಹೊಂದಿವೆ; ಅವುಗಳ ಸಂಪರ್ಕ ವಿಳಾಸ, ದೂರವಾಣಿ ಮತ್ತು ಇ ಮೇಲ್ ವಿಳಾಸವನ್ನು ಒದಗಿಸುವುದು ;

(ಆ) ವ್ಯವಸಾಯ ಸೇವಾ ಸಹಕಾರಿ ಸಂಘಗಳ ಬಲವರ್ಧನೆಗೆ ಸರ್ಕಾರದ ಯೋಜನೆಗಳಾವುವು; ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಉದ್ದೇಶಗಳಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ಮತ್ತು ಬಿಡುಗಡೆಯಾದ ಅನುದಾನವೆಷ್ಟು ;

(ಇ) ಸಹಕಾರ ಸಂಘಗಳ ಮೂಲಕ ರೈತರಿಗೆ ದೊರೆಯುತ್ತಿರುವ ವಿಶೇಷ ಸವಲತ್ತುಗಳು ಮತ್ತು ಸಹಾಯಧನಗಳು ಯಾವುವು ; (ಆದೇಶದ ಪ್ರತಿಯನ್ನು ಒದಗಿಸುವುದು)

(ಈ) ಕೋವಿಡ್-19ರ ಹಿನ್ನಲೆಯಲ್ಲಿ ರೈತರು ಈ ವ್ಯವಸಾಯ ಸಹಕಾರಿ ಸಂಘಗಳಲ್ಲಿ ಪಡೆದ ಸಾಲದ ಬಡ್ಡಿಯನ್ನು ಮನ್ನಾ ಮಾಡುವ ಮತ್ತು ಕಂತು ವಿಸ್ತರಣೆಯ ಅಗತ್ಯತೆಯನ್ನು ಮನಗಂಡಿದೆಯೇ; ಇಲ್ಲವಾದಲ್ಲಿ ಕಾರಣವೇನು ?